# ಯುಜಿಸಿಇಟಿ–2020 – ಮೊದಲನೇ ಸುತ್ತಿನ ಸೀಟು ಹಂಚಿಕೆ – ಅಭ್ಯರ್ಥಿಗಳಿಗೆ ಹೆಚ್ಚುವರಿ ಸೂಚನೆಗಳು

**Choice-1 ಅನ್ನು ಆಯ್ಕೆ ಮಾಡುವ ಅಭ್ಯರ್ಥಿಗಳು ಈ ಕೆಳಗಿನ ನಿರ್ದೇಶನಗಳನ್ನು ಪಾಲಿಸಬೇಕು.**

ಅ) ಸೀಟು ಹಂಚಿಕೆ ಫಲಿತಾಂಶ ಪ್ರಕಟವಾದ ನಂತರ ಅಭ್ಯರ್ಥಿಯು ತಮಗೆ ದೊರಕಿರುವ ಸೀಟು ತೃಪ್ತಿಕರವಾಗಿದೆ ಎಂದು ಖಚಿತಪಡಿಸಿಕೊಳ್ಳಬೇಕು.

ಆ) ತೃಪ್ತಿಕರವಾಗಿದ್ದಲ್ಲಿ, Choice-1 ಅನ್ನು ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಆಯ್ಕೆ ಮಾಡಿಕೊಳ್ಳಬೇಕು.

ಇ) ನಂತರ ಅದೇ ವೆಬ್ ಸೈಟ್‌ನಿಂದಲೇ ಮೂರು ಪ್ರತಿಯುಳ್ಳ ಚಲನ್ ಅನ್ನು ಡೌನ್ ಲೋಡ್ ಮಾಡಿಕೊಳ್ಳಬೇಕು / ಪ್ರಿಂಟ್ ತೆಗೆದುಕೊಳ್ಳಬೇಕು.

ಈ) ಚಲನ್ ನಲ್ಲಿ ಅಭ್ಯರ್ಥಿಯ ಎಲ್ಲಾ ವಿವರಗಳು ಅಂದರೆ, ಅಭ್ಯರ್ಥಿಯ ಹೆಸರು, ಸಿಇಟಿ ಸಂಖ್ಯೆ, ಆಯ್ಕೆಯಾಗಿರುವ ಕಾಲೇಜು ಮತ್ತು ಕೋರ್ಸಿನ ವಿವರ, ಅಭ್ಯರ್ಥಿಯು ಪಾವತಿಸಬೇಕಾದ ಶುಲ್ಕ, ಬ್ಯಾಂಕ್ ಖಾತೆ ಸಂಖ್ಯೆ ಇವೆಲ್ಲವನ್ನೂ ಮುದ್ರಿಸಲಾಗುವುದು. ಅಭ್ಯರ್ಥಿಯು ಸರಿಯಾಗಿದೆ ಎಂದು ಪರಿಶೀಲಿಸಿ ಸಹಿ ಮಾಡಬೇಕು.

ಉ) ನಂತರ ಪ್ರಾಧಿಕಾರದ ವೆಬ್‌ಸೈಟಿನಿಂದ NEFT / RTGS / IMPS Challan ಡೌನ್‌ಲೋಡ್ ಮಾಡಿ ನಿಗದಿತ ಶುಲ್ಕವನ್ನು ಪಾವತಿಸಬೇಕು.

ಎ) ಬ್ಯಾಂಕಿನವರು ಶುಲ್ಕವನ್ನು ತೆಗೆದುಕೊಂಡ ನಂತರ ಕೆಇಎ ಪ್ರತಿ ಮತ್ತು ಬ್ಯಾಂಕ್ ಪ್ರತಿಯನ್ನು ತಮ್ಮೊಡನೆ ಇಟ್ಟುಕೊಂಡು, ವಿದ್ಯಾರ್ಥಿ ಪ್ರತಿಯನ್ನು ಹಿಂದಿರುಗಿಸುತ್ತಾರೆ.

ಏ) ಶುಲ್ಕ ಪಾವತಿಯಾದ ಮೂರು ಗಂಟೆಯ ನಂತರ ಅಭ್ಯರ್ಥಿಗಳು ಪ್ರವೇಶ ಪತ್ರವನ್ನು ಡೌನ್ ಮಾಡಿಕೊಳ್ಳಬಹುದಾಗಿದೆ.

ಐ) ನಂತರ ಪ್ರಾಧಿಕಾರದ ವೆಬ್‌ಸೈಟ್ ನಿಂದ ಪ್ರವೇಶ ಪತ್ರವನ್ನು ಪಡೆದು ನಿಗದಿ ಪಡಿಸಿದ ಜಾಗದಲ್ಲಿ ಅಭ್ಯರ್ಥಿಯು ಸಹಿಯನ್ನು ಮಾಡಬೇಕು ಹಾಗು ಎಲ್ಲಾ ಮೂಲ ದಾಖಲೆಗೊಳೊಂದಿಗೆ ಪ್ರವೇಶ ಪತ್ರದಲ್ಲಿ ಮುದ್ರಿಸುವ ಕೊನೆಯ ದಿನಾಂಕದ ಒಳಗಾಗಿ ಸಂಬಂಧಿಸಿದ ಕಾಲೇಜಿನಲ್ಲಿ ಪ್ರವೇಶ ಪಡೆಯಬೇಕು.

ಒ) ಕಾಲೇಜಿನಲ್ಲಿ ಪ್ರವೇಶ ಪಡೆದ ನಂತರ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರವೇಶ ಪಡೆದ ಬಗ್ಗೆ ದಾಖಲಿಸಬೇಕು.

**Choice-2 ಅನ್ನು ಆಯ್ಕೆ ಮಾಡುವ ಅಭ್ಯರ್ಥಿಗಳು ಈ ಕೆಳಗಿನ ನಿರ್ದೇಶನಗಳನ್ನು ಪಾಲಿಸಬೇಕು.**

- Choice-2 ಅನ್ನು ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳು ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಶುಲ್ಕವನ್ನು ಪಾವತಿಸುವ ಅಗತ್ಯವಿರುವುದಿಲ್ಲ.
- Choice-2 ಅಭ್ಯರ್ಥಿಗಳು ಮೊದಲನೇ ಸುತ್ತಿನಲ್ಲಿ ಆಯ್ಕೆಯಾದ ಸೀಟನ್ನು ತಮ್ಮೊಡನೆ ಉಳಿಸಿಕೊಂಡು ಎರಡನೇ ಸುತ್ತಿನಲ್ಲಿ ಭಾಗವಹಿಸುತ್ತಾರೆ. ಅಂತಹ ಅಭ್ಯರ್ಥಿಗಳಿಗೆ ಯಾವುದೇ ಸೀಟು ಅಂದರೆ Higher Order Options ಹಂಚಿಕೆಯಾದಲ್ಲಿ ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟು ರದ್ದುಗೊಳ್ಳುತ್ತದೆ. ಎರಡನೇ ಸುತ್ತಿನಲ್ಲಿ ಯಾವುದೇ ಸೀಟು ಹಂಚಿಕೆಯಾಗದಿದ್ದಲ್ಲಿ ಮೊದಲ ಸುತ್ತಿನಲ್ಲಿ ಪಡೆದ ಸೀಟು ಅವರ ಬಳಿಯೇ ಇರುತ್ತದೆ.
- Higher Order Options ಅಂದರೆ, ಒಬ್ಬ ಅಭ್ಯರ್ಥಿಯು 180 ಆಪ್ಷನ್‌ಗಳನ್ನು ದಾಖಲಿಸಿದ್ದಲ್ಲಿ, ಇವುಗಳ ಪೈಕಿ ಮೊದಲನೇ ಸುತ್ತಿನಲ್ಲಿ ಅಭ್ಯರ್ಥಿಗೆ 123 ನೇ ಕ್ರಮಾಂಕದ ಆಪ್ಷನ್ ನ ಸೀಟು ದೊರಕಿದೆ ಎಂದು ಭಾವಿಸಿದಲ್ಲಿ, 1 ರಿಂದ 122 ನೇ ಆಪ್ಷನ್‌ಗಳ ಸೀಟುಗಳು Higher Order Options ಆಗುತ್ತದೆ. ಎರಡನೇ ಸುತ್ತಿನಲ್ಲಿ ಈ ಮೇಲಿನ ಯಾವುದೇ ಆಪ್ಷನ್‌ಗಳಿಗೆ ಮೆರಿಟ್ ಆಧಾರದ ಮೇಲೆ ಸೀಟು ಹಂಚಿಕೆಯಾದಲ್ಲಿ ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟು ರದ್ದುಗೊಳ್ಳುತ್ತದೆ.
- Higher Order Options ಗಳಲ್ಲಿ ಯಾವುದೇ ಸೀಟು ಹಂಚಿಕೆಯಾಗದಿದ್ದಲ್ಲಿ ಮೊದಲನೇ ಸುತ್ತಿನಲ್ಲಿ ಆಯ್ಕೆಯಾದ ಸೀಟು ಅಭ್ಯರ್ಥಿಯ ಹೆಸರಿನಲ್ಲಿರುತ್ತದೆ.

- ಅಭ್ಯರ್ಥಿಗಳು **higher order options** ಗಳನ್ನು ಬದಲಾಯಿಸಿಕೊಳ್ಳಬಹುದು ಅಥವಾ ಆದ್ಯತಾ ಕ್ರಮಗಳನ್ನು ಮಾರ್ಪಡಿಸಿಕೊಳ್ಳಬಹುದು ಅಥವಾ ಯಾವುದಾದರೂ **options** ಬೇಡವಾದಲ್ಲಿ ತೆಗೆದು ಹಾಕಬಹುದು.

**Choice-3 ಅನ್ನು ಆಯ್ಕೆ ಮಾಡುವ ಅಭ್ಯರ್ಥಿಗಳು ಈ ಕೆಳಗಿನ ನಿರ್ದೇಶನಗಳನ್ನು ಪಾಲಿಸಬೇಕು.**

- Choice-3 ಅನ್ನು ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳು ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಶುಲ್ಕವನ್ನು ಪಾವತಿಸುವ ಅಗತ್ಯವಿರುವುದಿಲ್ಲ.
- Choice-3 ಅಭ್ಯರ್ಥಿಗಳು ಮೊದಲ ಸುತ್ತಿನಲ್ಲಿ ಆಯ್ಕೆಯಾದ ಸೀಟು ಇಷ್ಟವಿರುವುದಿಲ್ಲ.
- Choice-3 ಅಭ್ಯರ್ಥಿಗಳು ಮೊದಲನೇ ಸುತ್ತಿನಲ್ಲಿ ಆಯ್ಕೆಯಾದ ಸೀಟನ್ನು ರದ್ದುಪಡಿಸಿಕೊಂಡು (ತಮ್ಮೊಡನೆ ಉಳಿಸಿಕೊಳ್ಳದೆ) ಎರಡನೇ ಸುತ್ತಿನಲ್ಲಿ ಭಾಗವಹಿಸುತ್ತಾರೆ. ಅಂತಹ ಅಭ್ಯರ್ಥಿಗಳಿಗೆ ಯಾವುದೇ ಸೀಟು ಹಂಚಿಕೆಯಾದಲ್ಲಿ ಮಾತ್ರ ಅವರು ಸೀಟನ್ನು ಆಯ್ಕೆ ಮಾಡಿಕೊಳ್ಳಬೇಕು.
- Choice-3 ಅಭ್ಯರ್ಥಿಗಳಿಗೆ ಎರಡನೇ ಸುತ್ತಿನಲ್ಲಿ ಇಚ್ಛೆ / ಆಯ್ಕೆಗಳನ್ನು ದಾಖಲಿಸುವ ಪ್ರಕ್ರಿಯೆ ಪ್ರಾರಂಭಿಸಿದ ನಂತರ ಮೊದಲನೇ ಸುತ್ತಿನಲ್ಲಿ ಅಭ್ಯರ್ಥಿಗಳು ದಾಖಲಿಸಿದ ಎಲ್ಲಾ **options** ಗಳನ್ನು ತೋರಿಸಲಾಗುವುದು (ಮೊದಲನೇ ಸುತ್ತಿನಲ್ಲಿ ಹಂಚಿಕೆಯಾಗಿ ಅಭ್ಯರ್ಥಿಯು ರದ್ದುಪಡಿಸಿಕೊಂಡ **option** ಅನ್ನು ಹೊರತುಪಡಿಸಿ ಉಳಿದ ಎಲ್ಲಾ ಇಚ್ಛೆ / ಆಯ್ಕೆಗಳು), ಅಭ್ಯರ್ಥಿಗಳು **options** ಗಳನ್ನು ಬದಲಾಯಿಸಿಕೊಳ್ಳಬಹುದು ಅಥವಾ ಆದ್ಯತಾ ಕ್ರಮಗಳನ್ನು ಮಾರ್ಪಡಿಸಿಕೊಳ್ಳಬಹುದು ಅಥವಾ ಯಾವುದಾದರೂ **options** ಬೇಡವಾದಲ್ಲಿ ತೆಗೆದು ಹಾಕಬಹುದು.

## Choice-4 ಅನ್ನು ಆಯ್ಕೆ ಮಾಡುವ ಅಭ್ಯರ್ಥಿಗಳು

ಅಭ್ಯರ್ಥಿಯು ತಮಗೆ ಮೊದಲ ಸುತ್ತಿನಲ್ಲಿ ದೊರಕಿರುವ ಸೀಟು ತೃಪ್ತಿಕರವಾಗಿಲ್ಲ ನನಗೆ ದೊರಕಿರುವ ಸೀಟು ಬೇಡ ಹಾಗೂ ನನಗೆ ಮುಂದಿನ ಸುತ್ತಿನಲ್ಲೂ ಸಹ ಯಾವುದೂ ಸೀಟು ತೆಗೆದುಕೊಳ್ಳಲು ಇಷ್ಟವಿಲ್ಲ, ನಾನು ಬೇರೆ ಸಂಸ್ಥೆಯಿಂದ ಸೀಟು ತೆಗೆದುಕೊಳ್ಳುತ್ತೇನೆ ಎಂದು ನಿರ್ಣಯಿಸಿದರೆ Choice-4 ಅನ್ನು ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಆಯ್ಕೆ ಮಾಡಿಕೊಳ್ಳಬೇಕು.